# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -(144)176ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಸ ವಾರ್ಡ್ ಸಂಖ್ಯೆ: 176–ಸೋಮೇಶ್ವರನಗರ (ಹಳೆ ವಾರ್ಡ್–144) ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀ. ಪ್ರದೀಪ್‌ಕುಮಾರ್ ಎನ್., ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕೆಂಪೇಗೌಡನಗರ ಉಪವಿಭಾಗ ಹಾಗೂ ನೋಡಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:17/09/2022 ರಂದು ಸೋಮವಾರದಂದು ಬೆಳಗ್ಗೆ 10.30 ರಿಂದ 12.00 ರವರೆಗೆ ವಾರ್ಡ್ ಕಮಿಟಿ ಸಭೆಯನ್ನು ಟಿ. ಮರಿಯಪ್ಪ ರಸ್ತೆಯಲ್ಲಿರುವ ವಾರ್ಡ್ ಕಛೇರಿ ಸಭಾಂಗಣದಲ್ಲಿ ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಆಹ್ವಾನ ನೀಡಿದ್ದು, ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಶ್ರೀ. ಪ್ರದೀಪ್‌ಕುಮಾರ್ ಎನ್, ಸ.ಕಾ.ನಿ.ಅ (ಕೆ.ಗೌ.ನ) ಹಾಗೂ ನೋಡಲ್ ಅಧಿಕಾರಿ.
2. ಶ್ರೀ. ಆರ್. ಕೊಟ್ರೇಶ್ ನಾಯಕ್, ಸಹಾಯಕ ಅಭಿಯಂತರರು, ವಾರ್ಡ್–144.
3. ಶ್ರೀ. ರವೀಂದ್ರ ಹಿಜೇರಿ, ಹಿರಿಯ ಆರೋಗ್ಯ ಪರಿವೀಕ್ಷಕರು.
4. ಶ್ರೀಮತಿ. ಸುರೇಖ ಆರ್. ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–144.
5. ಶ್ರೀ. ಆರ್. ರಾಘವೇಂದ್ರ, ಕಂದಾಯ ವಸೂಲಿಗಾರರು
6. ಶ್ರೀಮತಿ. ದೀಪಿಕ, ಸಹಾಯಕ ಅಭಿಯಂತರರು ಬೆಂ.ನೀ.ಸ. & ಒ. ಮಂಡಳಿ.
7. ಹಾಗೂ ಸಾರ್ವಜನಿಕರು.

*********

1. ನೋಡಲ್ ಅಧಿಕಾರಿಯವರು ಮಾತನಾಡಿ ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡ ಕ್ರಮಗಳ ಕುರಿತು ಕಳೆದ ಸಭೆಯ ನಡವಳಿಗಳನ್ನು ಓದುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು. ಅದರಂತೆ ವಾರ್ಡ್ ಅಭಿಯಂತರರು ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿ ದೂರುಗಳಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಿಸಿದರು. ಅದರಂತೆ ಕಳೆದ ಸಭೆಯ ನಡವಳಿಗಳ ದೂರುಗಳನ್ನು ಪರಿಹರಿಸಲಾಗಿರುತ್ತದೆ.



Scanned with CamScanner

2. ಸಭೆಯಲ್ಲಿ ಹಾಜರಿದ್ದ ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ಪ್ರದೇಶಗಳ ವಿಂಗಡಣೆಯಂತೆ ವಾರ್ಡ್ ಸಭೆಗಳನ್ನು ನಡೆಸಲು ಹಾಗೂ ಸದರಿ ಕಟ್ಟಡದಲ್ಲಿ ಸಮಯವನ್ನು ಹೊಂದಾಣಿಕೆ ಮಾಡಿಕೊಡು ಎರಡು ವಾರ್ಡ್‌ಗಳಾದ ಅಶೋಕ ಸ್ಥಂಭ ವಾರ್ಡ್ 175 ಮತ್ತು ಸೋಮೇಶ್ವರನಗರ ವಾರ್ಡ್ 176ರ ಸಭೆಗಳನ್ನು ನಡೆಸಲು ಕೋರಿದರು. ಈ ಹಿನ್ನೆಲೆಯಲ್ಲಿ ಅಧ್ಯಕ್ಷರು ಮಾತನಾಡಿ ಈ ತಹಲ್‌ವರೆಗೆ ಮೇಲಾಧಿಕಾರಿಗಳಿಂದ ಇಂತಹ ಯಾವುದೇ ಸುತ್ತೋಲೆಗಳು ಇರುವುದಿಲ್ಲ. ಮುಂದಿನ ಸುತ್ತೋಲೆ ಹೊರಡಿಸಿರುವ ವರೆಗೆ ಸೋಮೇಶ್ವರನಗರ 176 ವಾರ್ಡ್‌ನ ಎಲ್ಲಾ ಸಭೆಗಳನ್ನು ಸದರಿ ಕಟ್ಟಡದಲ್ಲಿಯೇ ಮುಂದುವರೆಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

3. ವಾರ್ಡಿನ ಸ್ಥಳೀಯರಾದ ಶ್ರೀ. ಅಜ್ಮಲ್ ರವರು ಮಾತನಾಡಿ ವಾರ್ಡ್ ಪ್ರದೇಶದಲ್ಲಿ ಸರಿಯಾದ ಸಮಯಕ್ಕೆ ವಿದ್ಯುತ್‌ಚ್ಛಕ್ತಿ ಸರಬರಾಜು ಮತ್ತು ಸದರಿ ವಾರ್ಡಿನ ರಸ್ತೆಗಳಾದ ಸೋಮೇಶ್ವರನಗರ, ಕೆ.ಎಂ. ಕಾಲೋನಿಗಳಲ್ಲಿ ಸುಮಾರು 10 ವಿದ್ಯುತ್ ಕಂಬಗಳು ಹಾಳಾಗಿದ್ದು, ಬದಲಿಸಿಕೊಡುವಂತೆ ಸಾಕಷ್ಟು ಬಾರಿ ಕೋರಿದ್ದರೂ ಸಹ ಈ ತಹಲ್‌ವರೆವಿಗೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಹಿಂದಿನ ಸಭೆಗಳಲ್ಲಿ ದೂರಿದ್ದರು. ಈ ಸಂಬಂಧ ನೋಡಲ್ ಅಧಿಕಾರಿಯವರು ಹಿಂದಿನ ಸಭೆಯಲ್ಲಿ ನಿರ್ದೇಶನ ನೀಡಿರುವ ಮೇರೆಗೆ ಒಂದು ವಿದ್ಯುತ್ ಕಂಬವನ್ನು ಸರಿಪಡಿಸಿರುವುದಾಗಿ ವಾರ್ಡ್ ಅಭಿಯಂತರರು ಹಿಂದಿನ ಸಭೆಯಲ್ಲಿ ತಿಳಿಸಿದ್ದರು. ಆದರೆ ಈ ಸಭೆಯಲ್ಲಿಯೂ ಸಹ ಬೆಸ್ಕಾಂ ಇಲಾಖೆಯ ಗೈರು ಹಾಜರಾಗಿರುವುದರಿಂದ ಮುಂದಿನ ಸಭೆಯಲ್ಲಿ ಈ ವಿಷಯದ ಬಗ್ಗೆ ಚರ್ಚಿಸಲಾಗುವುದೆಂದು ತಿಳಿಸಿದರು.

4. ವಾರ್ಡಿನ ಸ್ಥಳೀಯರಾದ ಶ್ರೀ. ಸುಮಂತ್, ಶ್ರೀ.ಮುರಳಿ ಹಾಗೂ ಶ್ರೀ. ಸುರೇಶ್ ರವರು ಮಾತನಾಡಿ ಪ್ರಸ್ತುತ ವಾರ್ಡ್‌ಗಳ ವಿಂಗಡಣೆಯಂತೆ ಅಶೋಕ ಸ್ಥಂಭ ವಾರ್ಡ್ 175ರ ಸಿದ್ಧಾಪುರದ ಪೂಜಮ್ಮ ರಸ್ತೆಗೆ ನೀರು ಮತ್ತು ಒಳಚರಂಡಿ ವ್ಯವಸ್ಥೆ ಕಲ್ಪಿಸಿ ನಂತರ ರಸ್ತೆ ಅಭಿವೃದ್ಧಿಪಡಿಸಿಕೊಡಬೇಕೆಂದು ಮನವಿ ಮಾಡಿದರು. ಈ ಹಿನ್ನೆಲೆಯಲ್ಲಿ ಅಧ್ಯಕ್ಷರು ಮಾತನಾಡಿ ಸದರಿ ರಸ್ತೆಯ ಬಗ್ಗೆ ಮಾನ್ಯ ಚಿಕ್ಕಪೇಟೆ ವಿಧಾನ ಸಭಾ ಕ್ಷೇತ್ರದ ಶಾಸಕರವರೊಂದಿಗೆ ಚರ್ಚಿಸಿ ಅನುದಾನ ಬಿಡುಗಡೆ ಆದ ನಂತರ ಸೂಕ್ತ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.



Scanned with CamScanner

5. ವಾರ್ಡಿನ ಸ್ಥಳೀಯರಾದ ಶ್ರೀ. ಅಶೋಕ್ ಜಿ. ರವರು ಮಾತನಾಡಿ ಪಳೇಕಮ್ಮ ದೇವಸ್ಥಾನದ ಹತ್ತಿರವಿರುವ ಖಾಲಿ ಜಾಗದ ವಿವರಗಳನ್ನು ಹಿಂದಿನ ಸಭೆಯಲ್ಲಿ ನೀಡಿದ್ದರೂ ಸಹ ಮತ್ತೊಮ್ಮೆ ವಿವರ ಕೇಳೀದ ಹಿನ್ನೆಲೆಯಲ್ಲಿ ಸಹಾಯಕ ಕಂದಾಯ ಅಧಿಕಾರಿಯವರ ಕಛೇರಿಯಲ್ಲಿ ಖುದ್ದಾಗಿ ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳುವಂತೆ ಅಧ್ಯಕ್ಷರು ಶ್ರೀ. ಅಶೋಕ್‌ರವರಿಗೆ ತಿಳಿಸಿದರು.

6. ವಾರ್ಡಿನ ಸ್ಥಳೀಯರಾದ ಶ್ರೀ. ಸುರೇಶ್ ರವರು ಮಾತನಾಡಿ ಸೋಮೇಶ್ವರನಗರದ 1ನೇ ಅಡ್ಡರಸ್ತೆ, ನಿಮ್ಹಾನ್ಸ್ ಕಾಂಪೌಂಡ್ ಹತ್ತಿರ ನಿರ್ಮಿಸುತ್ತಿರುವ ಕುಡಿಯುವ ನೀರಿನ ಘಟಕದ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಮತ್ತೊಮ್ಮೆ ಕೋರಿದರು. ಈ ಹಿಂದೆ ಸಾರ್ವಜನಿಕರ ಕೋರಿಕೆಯಂತೆ ಸೋಮೇಶ್ವರನಗರದ 1ನೇ ಅಡ್ಡರಸ್ತೆ, ನಿಮ್ಹಾನ್ಸ್ ಕಾಂಪೌಂಡ್ ಹತ್ತಿರ ಕುಡಿಯುವ ನೀರಿನ ಘಟಕದ ಕಾಮಗಾರಿಯನ್ನು ಪ್ರಗತಿಯಲ್ಲಿರುತ್ತದೆ. ಆದರೆ ಸೋಮೇಶ್ವರನಗರ 1ನೇ ಮತ್ತು 2ನೇ ಅಡ್ಡರಸ್ತೆಯ ಕೆಲವು ಸಾರ್ವಜನಿಕರು ಸದರಿ ನಿರ್ಮಾಣವಾಗುತ್ತಿರುವ ಕುಡಿಯು ನೀರಿನ ಘಟಕ ಬೇಡವೆಂದು ಆಕ್ಷೇಪಣೆಯನ್ನು ವ್ಯಕ್ತಪಡಿಸಿರುತ್ತಾರೆ. ಅದರಂತೆ ದಿನಾಂಕ:16-09-2022 ರಂದು ಚಿಕ್ಕಪೇಟೆ ವಿಧಾನ ಸಭಾ ಕ್ಷೇತ್ರದ ಶಾಸಕರು ವಾರ್ಡಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸೋಮೇಶ್ವರನಗರ 1ನೇ ಮತ್ತು 2ನೇ ಅಡ್ಡರಸ್ತೆಯ ಕೆಲವು ಸಾರ್ವಜನಿಕರ ಕೋರಿಕೆಯಂತೆ ಸದರಿ ಕುಡಿಯುವ ನೀರಿನ ಘಟಕವನ್ನು ಸ್ಥಳಾಂತರಿಸುವಂತೆ ನಿರ್ದೇಶನ ನೀಡಿರುವ ಮೇರೆಗೆ ಕಾಮಗಾರಿಯನ್ನು ಸ್ಥಗಿತಗೊಳಿಸಲಾಗಿರುತ್ತದೆ. ಹಾಗೂ ಮೇಲಾಧಿಕಾರಿಗಳು ನೀಡುವ ಆದೇಶದಂತೆ ಮುಂದಿನ ಕ್ರಮ ವಹಿಸಲಾಗುವುದೆಂದು ಅಧ್ಯಕ್ಷರು ಸಭೆಯಲ್ಲಿ ತಿಳಿಸಿದರು.

7. ವಾರ್ಡಿನ ಸ್ಥಳೀಯರಾದ ಶ್ರೀ. ಜಯರಾಂ ಎಂ.ಜಿ. ರವರು ಮಾತನಾಡಿ 6ನೇ ಅಡ್ಡರಸ್ತೆಯಲ್ಲಿರುವ ಬೋರ್‌ವೆಲ್‌ಗೆ ಅಳವಡಿಸಿರುವ ಮುಚ್ಚಳವು ಹಾಳಾಗಿದ್ದು, ಸರಿಪಡಿಸಲು ಕೋರಿದರು. ಈ ಹಿನ್ನೆಲೆಯಲ್ಲಿ ಅಧ್ಯಕ್ಷರು ಮಾತನಾಡಿ ವಾರ್ಡಿನ ಅಭಿಯಂತರರಿಗೆ ಕೂಡಲೇ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದರು.

8. ವಾರ್ಡಿನ ಸ್ಥಳೀಯರಾದ ಶ್ರೀ. ಜಯರಾಂ ಎಂ.ಜಿ. ರವರು ಮಾತನಾಡಿ ರಾಘವೇಂದ್ರ ಕಾಲೋನಿ ಮತ್ತು ಗುಟ್ಟೇಪಾಳ್ಯದಲ್ಲಿ ಒಳಚರಂಡಿಯ ಚೇಂಬರ್‌ನ್ನು ಕೂಡಲೇ ಸ್ವಚ್ಛಗೊಳಿಸಿ ಡೆಬ್ರಿಸ್ ತೆರವುಗೊಳಿಸುವಂತೆ ಕೋರಿದರು. ಈ ಹಿನ್ನೆಲೆಯಲ್ಲಿ ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ಇಲಾಖೆಯ ಕೆಲಸ ಪರಿವೀಕ್ಷಕರಿಗೆ ಈ ಬಗ್ಗೆ ಕೂಡಲೇ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚನೆ ನೀಡಿದರು.

AO



Scanned with CamScanner

9. ವಾರ್ಡಿನ ಸ್ಥಳೀಯರಾದ ಶ್ರೀ. ಅಜ್ಮಲ್ ರವರು ಮಾತನಾಡಿ ಕೆ.ಎಂ ಕಾಲೋನಿಯಲ್ಲಿ ಕುಡಿಯುವ ನೀರು ಕಲುಷಿತವಾಗಿರುವ ಬಗ್ಗೆ ದೂರಿದರು. ಈ ಬಗ್ಗೆ ಅಧ್ಯಕ್ಷರು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಸಹಾಯಕ ಅಭಿಯಂತರಾದ ಶ್ರೀಮತಿ. ದೀಪಿಕಾ ರವರಿಗೆ ಕೂಡಲೇ ಕ್ರಮ ವಹಿಸುವಂತೆ ನಿರ್ದೇಶನ ನೀಡಿದರು.

10. ವಾರ್ಡಿನ ಸ್ಥಳೀಯರಾದ ಶ್ರೀ. ಸಯ್ಯದ್ ರಿಯಾಜ್ ರವರು ಮಾತನಾಡಿ ಸೋಮೇಶ್ವರನಗರ 9ನೇ ಅಡ್ಡರಸ್ತೆಯಲ್ಲಿ ಅಳವಡಿಸಿರುವ ಬೆಸ್ಕಾಂ ಟ್ರಾನ್ಸ್‌ಫಾರ್ಮರ್‌ನಲ್ಲಿ ವಿದ್ಯುತ್‌ಚ್ಛಕ್ತಿ ಲೋಡ್ ಹೆಚ್ಚುವರಿಯಾಗಿದ್ದು, ಬೇರ್ಪಡಿಸಲು ಕೋರಿದರು. ಈ ಹಿನೆಲೆಯಲ್ಲಿ ಅಧ್ಯಕ್ಷರು ಮಾತನಾಡಿ ಬೆಸ್ಕಾಂ ಇಲಾಖೆಯವರು ಗೈರುಹಾಜರಿಯಾಗಿರುವುದರಿಂದ ಮುಂದಿನ ಸಭೆಯಲ್ಲಿ ಚರ್ಚಿಸಲಾಗುವುದೆಂದು ತಿಳಿಸಿದರು.

11. ವಾರ್ಡಿನ ಸ್ಥಳೀಯರಾದ ಶ್ರೀ. ವಿಜಯಕುಮಾರ್, ರವರು ಮಾತನಾಡಿ ಎಲಿಗೆಂಟ್ ಅಪಾರ್ಟ್‌ಮೆಂಟ್ ಹತ್ತಿರ ಹಾಳಾಗಿರುವ ವಿದ್ಯುತ್ ಕಂಬವನ್ನು ಸರಿಪಡಿಸಲು ಹಾಗೂ ಶ್ರೀ ಪಿಳೇಕಮ್ಮ ದೇವಸ್ಥಾನದ ಹತ್ತಿರ ಸಾರ್ವಜನಿಕರು ಹಾಕುವ ಘನತ್ಯಾಜ್ಯವನ್ನು ತೆರವುಗೊಳಿಸಲು ಕೋರಿದರು. ಅಧ್ಯಕ್ಷರು ಮಾತನಾಡಿ ಸಂಬಂಧಪಟ್ಟ ಇಲಾಖೆಯವರು ಈ ಬಗ್ಗೆ ಕ್ರಮ ವಹಿಸುವಂತೆ ಸೂಚನೆ ನೀಡಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

AO 17/9/22
ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 144 (176)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

17/9/22
ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 144 (176)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner